# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 525 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶಶೀಲ್ ಜಿ.ನಮೋಶಿ, (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 19.07.2024 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ಉಚಿತ IAS, KAS, ಗ್ರೂಪ್ 'ಸಿ' ಹಾಗೂ ಬ್ಯಾಂಕಿಂಗ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ, ಪ್ರಸಕ್ತ ವರ್ಷದಲ್ಲಿ ಎಷ್ಟು ಜನ ವಿದ್ಯಾರ್ಥಿಗಳು ಉಚಿತ ತರಬೇತಿಯನ್ನು ಪಡೆಯುತ್ತಿದ್ದಾರೆ; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ UPSC ನಾಗರೀಕ ಸೇವೆ ಹಾಗೂ ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿಗಳನ್ನು ನೀಡಲಾಗುತ್ತಿದೆ. ಪ್ರಸಕ್ತ 450 ಅಭ್ಯರ್ಥಿಗಳನ್ನು UPSC ನಾಗರೀಕ ಸೇವೆ ಪರೀಕ್ಷಾ ಪೂರ್ವ ತರಬೇತಿಗಾಗಿ ಹಾಗೂ 1350 ಅಭ್ಯರ್ಥಿಗಳನ್ನು ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿಗಾಗಿ ನಿಯೋಜಿಸಲಾಗಿದೆ. |
| ಆ) | ಕೆಲವು ಅಭ್ಯರ್ಥಿಗಳು ಇಲಾಖೆಯಿಂದ ಈಗಾಗಲೇ ಉಚಿತ ತರಬೇತಿಯನ್ನು ಪಡೆದಿದ್ದರೂ ಸಹ ಮತ್ತೊಮ್ಮೆ ಅವಕಾಶ ಪಡೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇಂತಹ ಪ್ರಕರಣಗಳಿಂದಾಗಿ ನಿಜವಾದ ಫಲಾನುಭವಿಗಳು ಯೋಜನೆಯಿಂದ ವಂಚಿತರಾಗುವುದಿಲ್ಲವೇ; (ವಿವರ ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಒಬ್ಬ ಅಭ್ಯರ್ಥಿಗೆ ಯಾವುದಾದರೂ ಒಂದು ತರಬೇತಿಯನ್ನು ಮಾತ್ರ ನೀಡಲಾಗುತ್ತದೆ. ಒಮ್ಮೆ ತರಬೇತಿ ಪಡೆದ ಅಭ್ಯರ್ಥಿಗಳನ್ನು ಅವರ ಹತ್ತನೇ ತರಗತಿಯ ನೋಂದಣಿ ಸಂಖ್ಯೆ ಆಧಾರದ ಮೇಲೆ ಆನ್-ಲೈನ್ ಅರ್ಜಿಸಲ್ಲಿಸುವ ಹಂತದಲ್ಲಿಯೇ ಬ್ಲಾಕ್ ಮಾಡಲಾಗುವುದರಿಂದ ಈಗಾಗಲೇ ತರಬೇತಿ ಪಡೆದವರು ಪುನಃ ಅರ್ಜಿಸಲ್ಲಿಸಲು ಸಾಧ್ಯವಾಗುವುದಿಲ್ಲ. |
| ಇ) | ಈ ಯೋಜನೆಯಡಿ ತರಬೇತಿ ಪಡೆಯುವ ವಿದ್ಯಾರ್ಥಿಗಳಿಗೆ ತರಬೇತಿ ಸಂದರ್ಭದಲ್ಲಿ ನೀಡುತ್ತಿರುವ ಸೌಲಭ್ಯಗಳೇನು; (ವಿವರ ನೀಡುವುದು) | 1. UPSC ನಾಗರೀಕ ಸೇವೆ ಪರೀಕ್ಷಾ ಪೂರ್ವ ತರಬೇತಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ 7 ರಿಂದ 9 ತಿಂಗಳುಗಳ ಉಚಿತ ತರಬೇತಿಯನ್ನು ನೀಡಲಾಗುವುದು.<br>2. ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ 3 ರಿಂದ 4 ತಿಂಗಳುಗಳ ಉಚಿತ ತರಬೇತಿಯನ್ನು ನೀಡಲಾಗುವುದು.<br>3. UPSC ನಾಗರೀಕ ಸೇವೆ ಪರೀಕ್ಷಾ ಪೂರ್ವ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ಈ ಕೆಳಗಿನಂತೆ ಶಿಷ್ಯ ವೇತನವನ್ನು ಪಾವತಿಸಲಾಗುವುದು. |

| ಕ್ರ.ಸಂ | ತರಬೇತಿ ಸಂಸ್ಥೆಯ ಸ್ಥಳ | ತಲಾ ಅಭ್ಯರ್ಥಿಗೆ ಪ್ರತಿ ತಿಂಗಳಿಗೆ ನಿಗದಿಪಡಿಸಿರುವ ಶಿಷ್ಯ ವೇತನ (ರೂ.ಗಳಲ್ಲಿ) |
|---|---|---|
| 1 | ನವದೆಹಲಿ | 10,000/- |
| 2 | ಹೈದರಾಬಾದ್ | 8,000/- |

..2

<table>
<tr>
<td></td>
<td></td>
<td>
<table>
<tr>
<td>3</td>
<td>ಕರ್ನಾಟಕ ರಾಜ್ಯದಲ್ಲಿನಸಂಸ್ಥೆಗಳು</td>
<td>ತರಬೇತಿ ಸಂಸ್ಥೆ ಇರುವ ಸ್ಥಳಕ್ಕೆ ಸಂಬಂಧಿಸಿದಂತೆ, ಸ್ಥಳೀಯ ಜಿಲ್ಲೆಯ ಅಭ್ಯರ್ಥಿಗಳಿಗೆ ರೂ.4,000/- ಹಾಗೂ ಹೊರ ಜಿಲ್ಲೆಗಳ ಅಭ್ಯರ್ಥಿಗಳಿಗೆ ರೂ.6,000/-</td>
</tr>
</table>
4. ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ತರಬೇತಿ ಸಂಸ್ಥೆ ಇರುವ ಸ್ಥಳಕ್ಕೆ ಸಂಬಂಧಿಸಿದಂತೆ, ಸ್ಥಳೀಯ ಜಿಲ್ಲೆಯ ಅಭ್ಯರ್ಥಿಗಳಿಗೆ ರೂ.4,000/- ಹಾಗೂ ಹೊರ ಜಿಲ್ಲೆಗಳ ಅಭ್ಯರ್ಥಿಗಳಿಗೆ ರೂ.6,000/-ಗಳಂತೆ ಶಿಷ್ಯ ವೇತನ ಪಾವತಿಸಲಾಗುವುದು.<br>
5. ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ಒಂದು ಸೆಟ್ ಕೋರ್ಸ್ ಮೆಟೀರಿಯಲ್ ಅನ್ನು ಉಚಿತವಾಗಿ ನೀಡಲಾಗುವುದು.
</td>
</tr>
<tr>
<td>ಈ)</td>
<td>ರಾಜ್ಯದಲ್ಲಿ ಈ ಯೋಜನೆಯಡಿ ತರಬೇತಿ ಪಡೆಯುತ್ತಿರುವ ಕೆಲವು ಅಭ್ಯರ್ಥಿಗಳು ಪ್ರತೀ ತಿಂಗಳು ಕೇವಲ (ಸ್ಟೈಫಂಡ್) ಸಹಾಯ ಧನವನ್ನು ಪಡೆದು ತರಗತಿಗಳಿಗೆ ಹಾಜರಾಗದೇ ಬಯೋಮೆಟ್ರಿಕ್ ಯಂತ್ರಗಳಲ್ಲಿ ತಮ್ಮ ಹಾಜರಾತಿಯನ್ನು ಸರ್ಕಾರಕ್ಕೆ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td>
<td rowspan="2">ಪ್ರಸಕ್ತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ UPSC ನಾಗರೀಕ ಸೇವೆ ಹಾಗೂ ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿಗಳಿಗಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ನಿಯೋಜಿಸಲಾಗಿದೆ. ತರಬೇತಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಂದ ತರಬೇತಿಗೆ ನಿಯಮಿತವಾಗಿ ಹಾಜರಾಗುವ ಬಗ್ಗೆ ಮುಚ್ಚಳಿಕೆ ಪತ್ರವನ್ನು ಬರೆಸಿಕೊಳ್ಳಲಾಗಿದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಬಯೋಮೆಟ್ರಿಕ್ ಹಾಜರಾತಿಯನ್ನು ಕಡ್ಡಾಯಗೊಳಿಸಲಾಗಿದೆ. ಆದಾಗ್ಯೂ ಯಾವುದೇ ಅಭ್ಯರ್ಥಿಗಳು ತರಬೇತಿಗೆ ಸರಿಯಾಗಿ ಹಾಜರಾಗದಿರುವುದು ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಗಳಿಂದ ಇಲಾಖಾ ವತಿಯಿಂದ ಭರಿಸಿರುವ ಎಲ್ಲಾ ವೆಚ್ಚವನ್ನು ನಿಯಮಾನುಸಾರ ವಸೂಲಿ ಮಾಡಲು ಕ್ರಮವಹಿಸಲಾಗುವುದು.</td>
</tr>
<tr>
<td>ಉ)</td>
<td>ಹಾಗಿದ್ದಲ್ಲಿ, ಇಂತಹ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?</td>
</tr>
</table>

**ಸಂಖ್ಯೆ:ಹಿಂವಕ 538 ಬಿಂಎಂಎಸ್ 2024**

**(ಶಿವರಾಜ. ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.